ಮೇ-2021

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

ಸ್ವಚ್ಛ ಭಾರತ – ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ | ಸ್ವಚ್ಛ ಸಂಕೀರ್ಣ | ಸ್ವಚ್ಛಮೇವ ಜಯತೇ SWACHHAMEVA JAYATE | ಜಲೋತ್ಸವ – ಮನೆ ಮನೆಗೆ ಗಂಗೆ | Har Ghar Jal – Jal Jeevan Mission

## ಋತುಚಕ್ರ ನೈರ್ಮಲ್ಯ ದಿನಾಚರಣೆ:




ಋತುಚಕ್ರದ ಬಗ್ಗೆ ಗ್ರಾಮೀಣ ಪ್ರದೇಶದ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯ ನಿರ್ವಹಿಸುತ್ತಿದೆ. ಗ್ರಾಮೀಣ ಪ್ರದೇಶದಲ್ಲಿನ ಮಹಿಳೆಯರು ಇಂದಿಗೂ ಹಳೆಯ ಕ್ರಮಗಳನ್ನೇ ಅನುಸರಿಸುವುದರ ಜೊತೆಗೆ ಋತುಚಕ್ರದ ಸಂದರ್ಭದಲ್ಲಿ ಎದುರಾಗುವ ಸಮಸ್ಯೆಗಳ ಬಗ್ಗೆ ಮುಕ್ತವಾಗಿ ಮಾತನಾಡಲು ಹಿಂಜರಿಯುತ್ತಿದ್ದಾರೆ. ಹೀಗಾಗಿ ಅನೇಕ ರೀತಿಯ ದೈಹಿಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಇಂತಹ ಮಹಿಳೆಯರನ್ನು ಮಾನಸಿಕವಾಗಿ ಸದೃಢರನ್ನಾಗಿಸುವ ಕಾರ್ಯ ನಮ್ಮಿಂದಾಗಬೇಕಿದೆ. ಆದ್ದರಿಂದ ಮೇ 28ನ್ನು ವಿಶ್ವದಾದ್ಯಂತ **Menstrual Hygiene Day** ಆಗಿ ಆಚರಿಸಲಾಗುತ್ತದೆ.

ನಮ್ಮ ರಾಜ್ಯ ಕರ್ನಾಟಕದಾದ್ಯಂತ ಈ ದಿನವನ್ನು ವಿಭಿನ್ನವಾಗಿ ಆಚರಿಸಲಾಗಿದ್ದು, ಕೆಲ ಜಿಲ್ಲೆಗಳಲ್ಲಿ ನುರಿತ ವೈದ್ಯರು ಮತ್ತು ವೈದ್ಯಾಧಿಕಾರಿಗಳಿಂದ ರೇಡಿಯೋ ಕಾರ್ಯಕ್ರಮ ಮತ್ತು ಫೇಸ್‌ಬುಕ್, ಯೂಟ್ಯೂಬ್ ಲೈವ್ ಕಾರ್ಯಕ್ರಮಗಳನ್ನು ನಡೆಸಿಕೊಡುವ ಮೂಲಕ ಗ್ರಾಮೀಣ ಭಾಗದ ಮಹಿಳೆಯರ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸಿ, ಋತುಚಕ್ರ ಸಂಬಂಧಿತ ಸಮಸ್ಯೆಗಳು, ಪರಿಹಾರಗಳ ಬಗ್ಗೆ ಸಾಕಷ್ಟು ಮಾಹಿತಿಯನ್ನು ಒದಗಿಸಲಾಯಿತು. ಕೆಲವು ಜಿಲ್ಲೆಗಳಲ್ಲಿ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಂದ ಮನೆ ಮನೆಗೆ ಭೇಟಿ ನೀಡಿ ಹದಿಹರೆಯದ ಹೆಣ್ಣುಮಕ್ಕಳಿಗೆ ಋತುಚಕ್ರ ನೈರ್ಮಲ್ಯದ ಕುರಿತು ಮಾಹಿತಿ ನೀಡಲಾಯಿತು. ಮನೆ–ಮನೆ ಭೇಟಿ, ಫೋನ್ ಇನ್ ಕಾರ್ಯಕ್ರಮ, ಸಾಮಾಜಿಕ ಮಾಧ್ಯಮಗಳ ಮೂಲಕ ಲೈವ್ ಕಾರ್ಯಕ್ರಮ, ತರಬೇತಿ, ಆಟೋ ಪ್ರಚಾರ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಋತುಚಕ್ರ ನೈರ್ಮಲ್ಯ ದಿನಾಚರಣೆಯನ್ನು ವಿಶಿಷ್ಟ ರೀತಿಯಲ್ಲಿ ಯಶಸ್ವಿಯಾಗಿ ಆಚರಿಸಲಾಯಿತು.





## Social Media Champion ಸ್ಪರ್ಧೆ:




ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು **ಸ್ವಚ್ಛ ಭಾರತ್ ಮಿಷನ್(ಗ್ರಾ)** ಹಾಗೂ **ಜಲ ಜೀವನ್ ಮಿಷನ್** ಯೋಜನೆಗಳನ್ನು ರಾಜ್ಯಾದ್ಯಂತ ಅನುಷ್ಠಾನಗೊಳಿಸುತ್ತಿದ್ದು, ಈ ಯೋಜನೆಗಳಡಿ ಕೈಗೆತ್ತಿಕೊಳ್ಳಲಾಗುವ ಕಾರ್ಯಚಟುವಟಿಕೆಗಳ ಬಗ್ಗೆ ನಿರ್ದಿಷ್ಟ ಸಂದೇಶಗಳನ್ನೊಳಗೊಂಡ ಮಾಹಿತಿಯನ್ನು ಕ್ಷಿಪ್ರಗತಿಯಲ್ಲಿ ರಾಜ್ಯದ ಗ್ರಾಮೀಣ ಪ್ರದೇಶದ ಜನರಿಗೆ ತಲುಪಿಸಲು ವಿವಿಧ ಸಾಮಾಜಿಕ ಮಾಧ್ಯಮಗಳು ಅತ್ಯಂತ ಪರಿಣಾಮಕಾರಿ ಮಾಧ್ಯಮಗಳಾಗಿವೆ. ಈ ಪೈಕಿ ಫೇಸ್‌ಬುಕ್ ಹಾಗೂ ಯೂಟ್ಯೂಬ್ ಅತ್ಯಂತ ಪರಿಣಾಮಕಾರಿ ಸಾಮಾಜಿಕ ಮಾಧ್ಯಮಗಳಾಗಿದ್ದು, ಇಲಾಖೆಯ ಫೇಸ್‌ಬುಕ್ ಹಾಗೂ ಯೂಟ್ಯೂಬ್ ಚಾನೆಲ್ ಅನ್ನು ಹೆಚ್ಚು ಪ್ರಚಾರ ಮಾಡುವ ಜೊತೆಗೆ **ಸ್ವಚ್ಛ ಭಾರತ್ ಮಿಷನ್(ಗ್ರಾ)** ಹಾಗೂ **ಜಲ ಜೀವನ್ ಮಿಷನ್** ಯೋಜನೆಗಳಡಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮಾಲೋಚಕರುಗಳನ್ನು ಪ್ರೋತ್ಸಾಹಿಸುವ ಸಲುವಾಗಿ **"Social Media Champion"** ಸ್ಪರ್ಧೆ ಯನ್ನು ದಿನಾಂಕ: 01.03.2021 ರಿಂದ 31.08.2021 ರ ಕಾಲಾವಧಿಯವರೆಗೆ ಆಯೋಜಿಸಲಾಗಿದೆ. ಸ್ಪರ್ಧೆಯ ನಿಯಮಾವಳಿಗಳಂತೆ ಮಾರ್ಚ್ ಮಾಹೆಯಲ್ಲಿ ರಾಜ್ಯ ಕಛೇರಿಯ ಫೇಸ್‌ಬುಕ್ ಹಾಗೂ ಯೂಟ್ಯೂಬ್ ಅನ್ನು ಹೆಚ್ಚು ಪ್ರಚಾರ ಮಾಡುವ ಮೂಲಕ ಮಂಡ್ಯ ಜಿಲ್ಲೆಯ **IEC** ಮತ್ತು **SH** ಸಮಾಲೋಚಕರು ಕ್ರಮವಾಗಿ ಪ್ರಥಮ ಹಾಗೂ ದ್ವಿತೀಯ ಬಹುಮಾನಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಕೊಪ್ಪಳ ಜಿಲ್ಲೆಯ **SH** ಸಮಾಲೋಚಕರು ತೃತೀಯ ಬಹುಮಾನವನ್ನು ಪಡೆದುಕೊಂಡಿದ್ದಾರೆ. ಏಪ್ರಿಲ್ ಮಾಹೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ **HRD** ಸಮಾಲೋಚಕರು ಪ್ರಥಮ ಬಹುಮಾನವನ್ನು, ಚಿತ್ರದುರ್ಗ ಜಿಲ್ಲೆಯ **DPM** ಸಮಾಲೋಚಕರು ದ್ವಿತೀಯ ಬಹುಮಾನವನ್ನು ತಮ್ಮದಾಗಿಸಿಕೊಂಡಿದ್ದಾರೆ.

## Covid–19 ಕುರಿತು ಜಾಗೃತಿ:



ವಿಶ್ವಮಟ್ಟದಲ್ಲಿ ಮತ್ತು ರಾಷ್ಟ್ರಮಟ್ಟದಲ್ಲಿ ಮಾನವನ ಆರೋಗ್ಯಕ್ಕೆ ಮಾರಕವಾಗಿ ಪರಿಣಮಿಸಿರುವ ನೋವೆಲ್ ಕೊರೋನಾ ವೈರಸ್ ಅದೆಷ್ಟೋ ಅಮಾಯಕರ ಜೀವ ಬಲಿ ಪಡೆದುಕೊಂಡಿದೆ. ರಾಜ್ಯದಲ್ಲಿ 8.3.2020ರಂದು ಈ ಪ್ರಕರಣವು ಪ್ರಪ್ರಥಮ ಬಾರಿಗೆ ಪತ್ತೆಯಾದಾಗಿನಿಂದ ಹಿಡಿದು ಇಂದಿಗೂ ಈ ರೋಗವನ್ನು ನಿಯಂತ್ರಿಸಲು ಹಲವು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, **ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯಡಿ ಗ್ರಾಮಗಳನ್ನು ಸ್ಯಾನಿಟೈಜ್ ಮಾಡುವುದು ಹಾಗೂ ಮನೆ ಮನೆಗೆ ಭೇಟಿ ನೀಡಿ ವೈಯಕ್ತಿಕ ಸ್ವಚ್ಛತೆ, ಶುಚಿತ್ವದ ಬಗ್ಗೆ ಅರಿವು ಮೂಡಿಸುವ ಜೊತೆಗೆ ಗ್ರಾಮ ಪಂಚಾಯಿತಿ ಕಟ್ಟಡಗಳ ಮುಂಭಾಗದಲ್ಲಿ ಕೊರೋನಾ ವೈರಸ್ ಚಿತ್ರವನ್ನು ಬಿಡಿಸುವ ಮೂಲಕ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸುವ ಕೆಲಸಗಳನ್ನು ರಾಜ್ಯದ ವಿವಿಧೆಡೆಗಳಲ್ಲಿ ಮಾಡಲಾಗುತ್ತಿದೆ.

## ತರಬೇತಿ ಕಾರ್ಯಕ್ರಮಗಳು

### ODF+ ಘಟಕಾಂಶಗಳ ಅನುಷ್ಠಾನ ಕುರಿತ ತರಬೇತಿ:

**ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯ ಹಂತ–2ರ ಮಾರ್ಗಸೂಚಿಯಂತೆ **ODF+** ಘಟಕಾಂಶಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡುವ ಮೂಲಕ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಕಾಯ್ದುಕೊಳ್ಳಬೇಕಿದೆ. ಜೊತೆಗೆ **ಘನ** ಮತ್ತು **ದ್ರವ** ತ್ಯಾಜ್ಯ ನಿರ್ವಹಣೆಯನ್ನು ಗ್ರಾಮೀಣ ಕರ್ನಾಟಕದಾದ್ಯಂತ ಸಮರ್ಪಕವಾಗಿ ಮಾಡಬೇಕಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಗಳಲ್ಲಿ **ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯಡಿ ಕಾರ್ಯನಿರ್ವಹಿಸುತ್ತಿರವ ಜಿಲ್ಲಾ ಸಮಾಲೋಚಕರುಗಳಿಗೆ ದಿನಾಂಕ:05.05.2021ರಂದು **Video Conference** ಮೂಲಕ ತರಬೇತಿಯನ್ನು ನೀಡಲಾಯಿತು. ಉಪ ಕಾರ್ಯದರ್ಶಿ(ಅಭಿವೃದ್ಧಿ), ಇವರ ನೇತೃತ್ವದಲ್ಲಿ ನಡೆದ ತರಬೇತಿ ಕಾರ್ಯಕ್ರಮದಲ್ಲಿ ರಾಜ್ಯ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ **SLWM** ಸಮಾಲೋಚಕರುಗಳು, ಜಿಲ್ಲಾ ಸಮಾಲೋಚಕರುಗಳಿಗೆ ತರಬೇತಿ ನೀಡಿದರು.

### IMIS ತರಬೇತಿ:

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ನಿರ್ವಹಿಸುವ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿ ಕುರಿತು **IMIS** ನಲ್ಲಿ ದಾಖಲಿಸುವುದು ಅತ್ಯಂತ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ **ಸ್ವಚ್ಛ ಭಾರತ್ ಮಿಷನ್(ಗ್ರಾ)** ಯೋಜನೆಯಡಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ **IMIS** ಸಮಾಲೋಚಕರುಗಳಿಗೆ ಮೇ 21 ಮತ್ತು 26ನೇ ತಾರೀಖುಗಳಂದು **Video Conference** ಮೂಲಕ ತರಬೇತಿಯನ್ನು ನೀಡಲಾಯಿತು. ಉಪ ನಿರ್ದೇಶಕರು, **ಸ್ವಚ್ಛ ಭಾರತ್ ಮಿಷನ್(ಗ್ರಾ)**, ಇವರು ಎಲ್ಲಾ ಜಿಲ್ಲೆಗಳ **IMIS** ಸಮಾಲೋಚಕರುಗಳಿಂದ **Physical Progress and IMIS entry** ಕುರಿತು ಮಾಹಿತಿ ಪಡೆದು, **IMIS entry** ಕುರಿತು ಸಮಸ್ಯೆಗಳಿಗೆ ಪರಿಹಾರವನ್ನು ನೀಡುವ ಜೊತೆಗೆ ತರಬೇತಿಯನ್ನು ನೀಡಿದರು. ಈ ವೇಳೆ ರಾಜ್ಯ ಕಛೇರಿಯ **IMIS** ಸಮಾಲೋಚಕರು ಹಾಜರಿದ್ದರು.

## Experience sharing on Community Contribution in Jal Jeevan Mission

### (ಜಲ ಜೀವನ್ ಮಿಷನ್‌ನಲ್ಲಿ ಸಮುದಾಯ ವಂತಿಗೆ ಕುರಿತು ಅನುಭವ ಹಂಚಿಕೆ):

ಗ್ರಾಮೀಣ ಭಾರತದ ಎಲ್ಲಾ ಮನೆಗಳಿಗೆ 2024ರ ವೇಳೆಗೆ **ಕಾರ್ಯಾತ್ಮಕ ನಳ ಸಂಪರ್ಕ (FHTC)** ಕಲ್ಪಿಸುವ ಮೂಲಕ ಸುರಕ್ಷಿತ ಕುಡಿಯುವ ನೀರನ್ನು ಒದಗಿಸುವ ಮಹತ್ತರ ಉದ್ದೇಶದೊಂದಿಗೆ **ಜಲ ಜೀವನ್ ಮಿಷನ್** ಯೋಜನೆಯನ್ನು ಜಾರಿಗೆ ತರಲಾಗಿದೆ. ರಾಜ್ಯದಲ್ಲಿ **'ಮನೆ ಮನೆಗೆ ಗಂಗೆ'** ಎಂಬ ಹೆಸರಿನಿಂದಲೇ ಕರೆಯಲ್ಪಡುತ್ತಿರುವ ಈ ಯೋಜನೆಯ ಅನುಷ್ಠಾನ ಕಾರ್ಯ ಪ್ರಗತಿಯಲ್ಲಿದ್ದು, ಸಮುದಾಯ ವಂತಿಕೆಯನ್ನು ಸಂಗ್ರಹಿಸುವಲ್ಲಿ ರಾಜ್ಯದ ನಾಲ್ಕು ಜಿಲ್ಲೆಗಳಾದ **ದಕ್ಷಿಣ ಕನ್ನಡ, ಚಾಮರಾಜನಗರ, ಚಿಕ್ಕಮಗಳೂರು, ವಿಜಯಪುರ** ಮುಂಚೂಣಿಯಲ್ಲಿವೆ. ಈ ಜಿಲ್ಲೆಗಳ ಸಾಧನೆಯನ್ನು ಮಾದರಿಯಾಗಿಟ್ಟುಕೊಂಡು ಮೇ 28ರಂದು ಎಲ್ಲಾ ಜಿಲ್ಲೆಗಳ ಕಾರ್ಯನಿರ್ವಾಹಕ ಅಭಿಯಂತರರು, ಅನುಷ್ಠಾನ ನೆರವು ಸಂಸ್ಥೆಗಳು ಹಾಗೂ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ ಅಭಿಪ್ರಾಯ ಹಂಚಿಕೆ ಕಾರ್ಯಾಗಾರವನ್ನು **Video Conference** ಮೂಲಕ ನಡೆಸಲಾಯಿತು. ಸಮುದಾಯ ವಂತಿಕೆಯನ್ನು ಸಂಗ್ರಹಿಸುವಲ್ಲಿ ಎದುರಾದ ಸವಾಲುಗಳು ಮತ್ತು ಅವುಗಳನ್ನು ಎದುರಿಸಿದ ಪರಿ, ಕುರಿತು ಈ ಮೇಲೆ ತಿಳಿಸಿರುವ ನಾಲ್ಕು ಜಿಲ್ಲೆಗಳ ಕಾರ್ಯನಿರ್ವಾಹಕ ಅಭಿಯಂತರರು ತಮ್ಮ ತಮ್ಮ ಅನುಭವಗಳನ್ನು ಹಂಚಿಕೊಂಡರು. ಈ ಕಾರ್ಯಕ್ರಮದಲ್ಲಿ ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ನಿರ್ದೇಶಕರು**(ISA)**, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸೇರಿದಂತೆ ಎಲ್ಲಾ ಜಿಲ್ಲೆಗಳ ಕಾರ್ಯನಿರ್ವಾಹಕ ಅಭಿಯಂತರರು, **DPMs** ಮತ್ತು **ISA**ಗಳು ಪಾಲ್ಗೊಂಡಿದ್ದರು.